ಆ) ಬಂದಿದೆ.

ಬಿಜಾಪುರ ಜಿಲ್ಲಾ ಆಸ್ಪತ್ರೆಯಲ್ಲಿ 27 ವೈದ್ಯರ ಹುದ್ದೆ ಮಂಜೂರಾಗಿದ್ದು 18 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 9 ವೈದ್ಯರ ಹುದ್ದೆ ಖಾಲಿ ಇರುತ್ತವೆ. ಇತರೆ ಸಿಬ್ಬಂದಿಗಳು 291 ಹುದ್ದೆ ಮಂಜೂರಾಗಿದ್ದು, 230 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 61 ಸಿಬ್ಬಂದಿಗಳ ಹುದ್ದೆ ಖಾಲಿ ಇದೆ.

ಇ) ವಿಶೇಷ ನೇರ ನೇಮಕಾತಿ ಮುಖಾಂತರ 500 ವೈದ್ಯಾಧಿಕಾರಿಗಳ ಹುದ್ದೆ ಭರ್ತಿ ಮಾಡಲು ಸರ್ಕಾರದ ಅನುಮತಿ ದೊರೆತಿದ್ದು, ಮೊದಲನೇ ಹಂತದಲ್ಲಿ 250 ವೈದ್ಯಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. 2ನೇ ಹಂತದಲ್ಲಿ 250 ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು ಸಂದರ್ಶನಗಳನ್ನು ನಡೆಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ. ಹಾಗೂ ವಿಶೇಷ ನೇರ ನೇಮಕಾತಿ ಮುಖಾಂತರ 2807 ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ನೇಮಕಾತಿ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

ಈ) 2007-08ರಲ್ಲಿ ಮೇಲ್ಕಂಡ ಆಸ್ಪತ್ರೆಗೆ ಈ ಕೆಳಕಂಡಂತೆ ಸೌಲಭ್ಯಗಳನ್ನು ಕೈಗೆತ್ತಿಕೊಳ್ಳಲು ಪ್ರಸ್ತಾವನೆ ಇರುತ್ತದೆ.

ಧರ್ಮಶಾಲಾ	– ರೂ. 30 ಲಕ್ಷ
ಲಾಂಡ್ರಿ	– ರೂ. 25 ಲಕ್ಷ
ಎಫ್ಲುಯೆಂಟ್ ಟ್ರೀಟ್‌ಮೆಂಟ್ ಪ್ಲಾಂಟ್ ಮತ್ತು ಸಣ್ಣ ಪುಟ್ಟ ದುರಸ್ತಿ	–ರೂ. 25 ಲಕ್ಷ

ವಿದ್ಯಾರ್ಥಿವೇತನ ನೀಡುವಲ್ಲಿ ವಿಳಂಬ

1103 (1502) ಶ್ರೀ ಬಾಲರಾಜ್ ಎಸ್. (ಕೊಳ್ಳೇಗಾಲ) :– ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಸಮಾಜ ಕಲ್ಯಾಣ ಇಲಾಖೆಯಿಂದ ಉನ್ನತ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ (ವೈದ್ಯಕೀಯ/ಇಂಜಿನಿಯರಿಂಗ್/ಸ್ನಾತಕೋತ್ತರ ಪದವಿ) ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಇದರಿಂದಾಗಿ, ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರಕ್ಕೆ ತಿಳಿದಿದೆಯೇ ;

ಇ) ಹಾಗಿದ್ದಲ್ಲಿ, ಯಾವ ಸಾಲಿನಿಂದ ಬಾಕಿ ನೀಡಬೇಕಿದೆ (ವೈದ್ಯಕೀಯ/ ಇಂಜಿನಿಯರಿಂಗ್/ಸ್ನಾತಕೋತ್ತರ ವಿಭಾಗಗಳ ವಿವರ ನೀಡುವುದು) ;

ಈ) ಎಷ್ಟು ಕಾಲಾವಧಿಯೊಳಗೆ ವೇತನ ನೀಡಲಾಗುವುದು ;

ಉ) ಸಕಾಲದಲ್ಲಿ ವಿದ್ಯಾರ್ಥಿವೇತನವನ್ನು ನೀಡಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಮಾನ್ಯ ಸಮಾಜ ಕಲ್ಯಾಣ ಸಚಿವರು):–

ಆ) ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ವರಮಾನ ರೂ. 1.00 ಲಕ್ಷಕ್ಕಿಂತ ಕಡಿಮೆ ಇರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಸಮಾಜ ಕಲ್ಯಾಣ ಇಲಾಖೆ/ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳಿಂದ ನೀಡಲಾಗುತ್ತಿದ್ದು, ಇದರ ಪಾವತಿಯಲ್ಲಿ ವಿಳಂಬವಾಗುತ್ತಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) 2006–07ನೇ ಸಾಲಿನವರೆಗೂ ಈ ಕೆಳಕಂಡಂತಹ ಪ್ರಕರಣಗಳನ್ನು ಹೊರತು ಪಡಿಸಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ಅರ್ಜಿಗಳಿಗೆ ವಿದ್ಯಾರ್ಥಿವೇತನವನ್ನು ಪೂರ್ಣವಾಗಿ ಪಾವತಿ ಮಾಡಲಾಗಿದೆ. ಸರ್ಕಾರದ ಆದೇಶ ಸಂ. ಸಕಇ 410 ಪಕವಿ 2004(ಪಿ) ದಿನಾಂಕ : 14–2–2007ರನ್ವಯ ವೃತ್ತಿಪರ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಶೇ. 60 : 40ರ ಬದಲಿಗೆ ಶೇ. 100ರಷ್ಟು ಪೂರ್ಣ ಶುಲ್ಕವನ್ನು ಪಾವತಿಸುವಂತೆ ಆದೇಶಿಸಿರುವ ಮೇರೆಗೆ ಮಾರ್ಚ್ 2007ರ ಅಂತ್ಯಕ್ಕೆ ಬಾಕಿ ಇರುವ ಅರ್ಜಿಗಳು ಹಾಗೂ ನ್ಯೂನತೆಗಳಿದ್ದ ಕೆಲವು ಅರ್ಜಿಗಳನ್ನು ಸರಿಪಡಿಸಿ 2007–08ನೇ ಸಾಲಿನಲ್ಲಿ ಈ ಕೆಳಕಂಡಂತೆ ಒದಗಿಸಿರುವ ಅನುದಾನದಿಂದ ಪಾವತಿಸಲಾಗುವುದು.

	2006–07			2007–08		
	ಒದಗಿಸಿದ ಅನುದಾನ	ಬಿಡುಗಡೆ ಮಾಡಿದ ಅನುದಾನ	ಖರ್ಚು ಮಾಡಿದ ಅನುದಾನ	ಒದಗಿಸಿದ ಅನುದಾನ	ಬಿಡುಗಡೆ ಮಾಡಿದ ಅನುದಾನ	ಖರ್ಚು ಮಾಡಿದ ಅನುದಾನ
ಯೋಜನೆ	3289.75	1803.18	1803.18	5556.75	3248.00	3248.00
ಯೋ.ತರ ವಿ.ಘ.ಯೋ. ಅಡಿ ಕ್ರೋಢಿಕೃತ ಅನುದಾನದ	2499.97 1278.67	2519.98 1278.67	2519.98 1278.67	5742.19 4500.00	2296.87	2296.87
ಒಟ್ಟು	7068.39	8602.13	8602.13	12798.94	5544.87	5544.87

2005–06ನೇ ಸಾಲಿನವರೆಗೂ ಎಲ್ಲಾ ಅರ್ಹ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿದೆ. ಆದರೆ 2006–07ನೇ ಸಾಲಿನಲ್ಲಿ ಅನುದಾನ ಕೊರತೆಯಿಂದಾಗಿ 49 ವೈದ್ಯಕೀಯ, 347 ಇಂಜಿನಿಯರಿಂಗ್, 202 ಸ್ನಾತಕೋತ್ತರ ವಿದ್ಯಾರ್ಥಿಗಳು ಸೇರಿ ಒಟ್ಟು 6838 ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡುವುದು ಬಾಕಿ ಇದ್ದು, ಇದಕ್ಕಾಗಿ ರೂ. 157.65 ಲಕ್ಷ ಅನುದಾನದ ಅವಶ್ಯಕತೆ ಇರುತ್ತದೆ.

ಈ) 2007–08ನೇ ಸಾಲಿನ ಎರಡನೇ ತ್ರೈಮಾಸಿಕ ಕಂತು ಬಿಡುಗಡೆಯಾದ ತಕ್ಷಣವೇ ಪ.ಜಾತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುವುದು.

2007–08ನೇ ಸಾಲಿನಲ್ಲಿಯೇ ಪರಿಶಿಷ್ಟ ವರ್ಗದ ಬಾಕಿ ವಿದ್ಯಾರ್ಥಿಗಳಿಗೂ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುವುದು.

ಉ) ಅನುಷ್ಠಾನಾಧಿಕಾರಿಗಳಾದ ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳಿಗೆ 2007–08ನೆ ಸಾಲಿನ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ವಿದ್ಯಾರ್ಥಿವೇತನ ಮಂಜೂರಾತಿ ಕಾರ್ಯಕ್ರಮವನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಸುತ್ತೋಲೆಯನ್ನು ಹೊರಡಿಸಲಾಗಿದೆ.

2007–08ನೇ ಸಾಲಿನ ಜಿಲ್ಲಾವಲಯ ಆಯವ್ಯಯದಲ್ಲಿ ರೂ. 3640.33 ಲಕ್ಷ ಅನುದಾನವನ್ನು ಒದಗಿಸಿಕೊಂಡಿದ್ದು, ಎಲ್ಲಾ ಅರ್ಹ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಪ್ರಸಕ್ತ ಸಾಲಿನಲ್ಲಿಯೇ ಸೂಕ್ತ ಕ್ರಮ ಕೈಗೊಳ್ಳಲಾಗುವುದು.